Bangalore

Regional News

15.09.2025 06.40 p.m.

ಆಕಾಶವಾಣಿ, ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಧಾರವಾಡದಲ್ಲಿ ಕೃಷಿಮೇಳ - ೨೦೨೫ಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ಧರಾಮಯ್ಯ - ಪ್ರತಿಯೊಬ್ಬರು ಪ್ರಗತಿ ಪರ ರೈತರಾಗುವಂತೆ ಕರೆ

೨. ರಾಜ್ಯದಲ್ಲಿ ಜಪಾನ್ ಉದ್ಯಮಿಗಳಿಂದ ೪ ಸಾವಿರ ಕೋಟಿ ರೂಪಾಯಿ ಬಂಡವಾಳ ಹೂಡಿಕೆ - ಸಚಿವ ಎಂ ಬಿ ಪಾಟೀಲ್ ಸ್ಪಷ್ಟನೆ

೩. ಬೆಳಗಾವಿಯಲ್ಲಿಂದು ವಿವಿಧ ರೈಲ್ವೇ ಕಾಮಗಾರಿ ಪರಿಶೀಲನೆ ನಡೆಸಿದ ಕೇಂದ್ರ ಸಚಿವ ವಿ ಸೋಮಣ್ಣ - ಮೂಲಸೌಕರ್ಯ ಸುಧಾರಿಸಲು ಅಧಿಕಾರಿಗಳಿಗೆ ಸೂಚನೆ

೪. ಬೆಂಗಳೂರಿನ ಆಧಾರ್ ತಂತ್ರಜ್ಞಾನ ಕೇಂದ್ರಕ್ಕೆ ನಾಳೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಭೇಟಿ

><><><><><><

ಧಾರವಾಡ ಕೃಷಿ ವಿಶ್ವ ವಿದ್ಯಾಲಯದಲ್ಲಿ ಆಯೋಜಿಸಿರುವ ಕೃಷಿಮೇಳ - ೨೦೨೫ಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು ಕೃಷಿ ವಿಶ್ವವಿದ್ಯಾಲಯಗಳು ಆದಷ್ಟು ರೈತರೊಂದಿಗೆ ಸಂಪರ್ಕ ಹೊಂದುವಂತೆ ಸಲಹೆ ನೀಡಿದ್ದಾರೆ. ರೈತರಿಗೆ ಹೊಸ ತಳಿ, ಹೊಸ ಗೊಬ್ಬರ, ತಂತ್ರಜ್ಞಾನದ ಕುರಿಂತೆ ಅರಿವು ಮೂಡಿಸುವಂತೆ ತಿಳಿಸಿದ್ದಾರೆ. ಪ್ರತಿಯೊಬ್ಬರು ಪ್ರಗತಿ ಪರ ರೈತರಾಗುವಂತೆ ಇದೇ ವೇಳೆ ಕರೆ ನೀಡಿದರು. ರಾಜ್ಯದಲ್ಲಿ ಶೇ ೬೦ರಷ್ಟು ಮಳೆಯಾಧರಿತ ಭೂಮಿ ಇದ್ದು ರೈತರು ಇದರ ಸದುಪಯೋಗಪಡಿಸಿಕೊಳ್ಳುಂತೆ ಹೇಳಿದರು. ಕೃಷಿ ವಿಶ್ವವಿದ್ಯಾಲಯಗಳು ಈ ಕುರಿತಂತೆ ರೈತರಿಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಕೃಷಿ ವಿಶ್ವವಿದ್ಯಾಲಯಗಳು ಸಂಶೋಧನೆಗೆ ಹೆಚ್ಚು ಒತ್ತು ನೀಡಿ ಇದನ್ನು ರೈತರಿಗೆ ತಲುಪಿಸುವ ಕಾರ್ಯವಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಕಾರ್ಯಕ್ರಮದಲ್ಲಿ ಹಲವು ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು.

><><><><><><

ತಮ್ಮ ಜಪಾನ್ ಪ್ರವಾಸ ಅತ್ಯಂತ ಯಶಸ್ವಿಯಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಪಾನ್ ದೇಶದ ವಿವಿಧ ಉದ್ಯಮಗಳು ರಾಜ್ಯದಲ್ಲಿ ೪ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಬಂಡವಾಳ ಹೂಡಿಕೆ ಮಾಡುವುದು ಖಾತ್ರಿಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಹೂಡಿಕೆ ಆಕರ್ಷಿಸುವ ದೃಷ್ಟಿಯಿಂದ ಜಪಾನ್‌ಗೆ ಇದು ತಮ್ಮ ಎರಡನೇ ಭೇಟಿಯಾಗಿದೆ. ದೇಶದಲ್ಲಿರುವ ಜಪಾನ್ ಉದ್ದಿಮೆಗಳಲ್ಲಿ ಶೇಕಡ ೫೦ರಷ್ಟು ಕಂಪನಿಗಳು ಕರ್ನಾಟಕದಲ್ಲೇ ಇವೆ ಎಂದು ಹೇಳಿದ್ದಾರೆ. ಈ ಭಾರಿ ಭೇಟಿಯ ವೇಳೆ ಹೋಂಡಾ ಮುಂತಾದ ಕಂಪನಿಗಳು ರಾಜ್ಯದಲ್ಲಿ ವಿಸ್ತರಣೆ, ಮುಕುಂದ್ ಸುಮಿ ಸ್ಟೀಲ್ಸ್ ಕಂಪನಿ ಜತೆ ಸಹಭಾಗಿತ್ವ ಮುಂತಾದ ವಿಚಾರ ಕುರಿತು ಚರ್ಚಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

><><><><><><

ರೈಲ್ವೇ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಬೆಳಗಾವಿಯಲ್ಲಿಂದು ಅಮೃತ ಭಾರತ ನಿಲ್ದಾಣ ಯೋಜನೆಯಡಿಯಲ್ಲಿ ಪುನರಾಭಿವೃದ್ಧಿಗೊಳ್ಳುತ್ತಿರುವ ಅಳ್ನಾವರ ರೈಲು ನಿಲ್ದಾಣದ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಇದೇ ವೇಳೆ, ಪ್ರಯಾಣಿಕರ ಅನುಕೂಲತೆಯನ್ನು ಹೆಚ್ಚಿಸಲು ಮತ್ತು ಒಟ್ಟಾರೆ ನಿಲ್ದಾಣದ ಮೂಲಸೌಕರ್ಯವನ್ನು ಸುಧಾರಿಸಲು ರೈಲ್ವೆ ಅಧಿಕಾರಿಗಳಿಗೆ ಸಲಹೆ-ಸೂಚನೆ ನೀಡಿದರು. ಈ ನಡುವೆ ಹುಬ್ಬಳ್ಳಿಯಿಂದ ಬೆಳಗಾವಿಯವರೆಗೆ ರೈಲಿನಲ್ಲಿ ಸಂಚರಿಸುವ ಮೂಲಕ, ಈ ಭಾಗದ ರೈಲು ಹಳಿಗಳ ತಪಾಸಣೆ ನಡೆಸಿ, ಪ್ರಮುಖ ಕಾರ್ಯಾಚರಣೆ ಮತ್ತು ಸುರಕ್ಷತಾ ಅಂಶಗಳನ್ನು ಪರಿಶೀಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ೨೦೧೪ರಿಂದ ಇಲ್ಲಿಯವರೆಗೆ ಬೆಳಗಾವಿ ಜಿಲ್ಲೆಯ ರೈಲ್ವೆ ಇಲಾಖೆಯ ಅಭಿವೃದ್ಧಿ ಕೆಲಸಗಳಿಗೆ ೨ ಸಾವಿರದ ೯೦೦ ಕೋಟಿ ರೂಪಾಯಿಗಳ ವೆಚ್ಚ ಮಾಡಲಾಗಿದೆ. ೧ ಸಾವಿರದ ೯೦೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾದ ಲೋಂಡಾ ಮೀರಜ್ ಡಬ್ಲಿಂಗ್ ಕೆಲಸ ಪೂರ್ಣಗೊಂಡಿದೆ. ಬೆಳಗಾವಿ ಕಿತ್ತೂರು ರೈಲ್ವೆ ಕಾಮಗಾರಿಗೆ ಅಗತ್ಯವಿರುವ ಭೂಸ್ವಾದೀನ ಪ್ರಕ್ರಿಯೆ ಶೇಕಡಾ ೯೦ ರಷ್ಟು ಪೂರ್ಣಗೊಂಡಿದೆ. ಉಳಿದ ಭೂಮಿಯನ್ನು ತ್ವರಿತವಾಗಿ ಪಡೆದು ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದ್ದಾರೆ. ಬೆಳಗಾವಿ, ಧಾರವಾಡ, ಹುಬ್ಬಳ್ಳಿ ಸೇರಿದಂತೆ ರಾಜ್ಯದಲ್ಲಿ ೩೦೦ ಮೇಲ್ಸೆತುಗಳ ನಿರ್ಮಾಣಕ್ಕೆ ಎಲ್ಲಾ ಹಣಕಾಸಿನ ನೆರವನ್ನು ಕೇಂದ್ರ ಸರ್ಕಾರ ನೀಡುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><

ಬಿಜೆಪಿಯೊಳಗೇ ಸಾಕಷ್ಟು ಭಿನ್ನಾಭಿಪ್ರಾಯಗಳಿರುವಾಗ ಆ ಪಕ್ಷದ ನಾಯಕರಿಂದ ಕಾಂಗ್ರೆಸ್ ಗೆ ಯಾವುದೇ ಸಲಹೆ ಬೇಕಾಗಿಲ್ಲ ಎಂದು ರಾಜ್ಯ ಸಣ್ಣ ನೀರಾವರಿ ಇಲಾಖೆ ಸಚಿವ ಎನ್.ಎಸ್. ಬೋಸರಾಜ್ ಹೇಳಿದ್ದಾರೆ. ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್. ಐ. ಟಿ ರಚನೆಯಾದಾಗ ಸ್ವಾಗತಿಸಿದ್ದ ಬಿಜೆಪಿಯವರು

ಇದೀಗ ಎಸ್ಐಟಿ ಯಾಕೆ ರಚನೆ ಮಾಡಿದ್ದೀರಿ ಎಂದು ಟೀಕೆ ಮಾಡುತ್ತಿದ್ದಾರೆ. ರಾಜ್ಯದ ಅಬಿವೃದ್ಧಿ ಪರ ಚಿಂತನೆಯಿಲ್ಲದ ಬಿಜೆಪಿಯವರು ಅನಗತ್ಯವಾಗಿ ಟೀಕೆ ಮಾಡುತ್ತಿದ್ದಾರೆ. ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವ ಸರ್ಕಾರದ ನಿಲುವು ಸಮರ್ಪಕವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

><><><><><><

ಕೇಂದ್ರ ರೈಲ್ವೆ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ನಾಳೆ ಬೆಂಗಳೂರಿಗೆ ಆಗಮಿಸಲಿದ್ದಾರೆ. ಮಧ್ಯಾಹ್ನ ಅವರು ಟಾಟಾ ನಗರದಲ್ಲಿ ಆಧಾರ್ ತಂತ್ರಜ್ಞಾನ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಬಳಿಕ ಅವರು, ಬೆಂಗಳೂರಿನ ದೊಡ್ಡಾನೆಕುಂದಿಯಲ್ಲಿ ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

><><><><><><

ಸಂವಿಧಾನದ ರಕ್ಷಣೆ ಎಲ್ಲ ನಾಗರಿಕರ ಜವಾಬ್ದಾರಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿಧಾನಸೌಧದದ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಹುಸಂಸ್ಕೃತಿಯುಳ್ಳ ದೇಶದಲ್ಲಿ ವಿವಿಧತೆಯಲ್ಲಿ ಏಕತೆಯನ್ನು ಕಾಪಾಡಲು ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ತರಲಾಗಿದೆ ಎಂದು ಹೇಳಿದ್ದಾರೆ.

ಮತಗಳ್ಳತನದಿಂದ ಸಂವಿಧಾನವನ್ನು ದುರ್ಬಲಗೊಳಿಸುವ ಕುತಂತ್ರ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ. ಸಂವಿಧಾನವನ್ನು ಪ್ರತಿಯೊಬ್ಬರು ಅರ್ಥೈಸಿಕೊಳ್ಳಬೇಕು ಎಂದು ಇದೇ ಸಂದರ್ಭದಲ್ಲಿ ಅವರು ಕರೆ ನೀಡಿದ್ದಾರೆ.

><><><><><><

ರಾಜ್ಯದ ವಿವಿಧೆಡೆ ಇಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಿಸಲಾಯಿತು. ಸರ್ವಶ್ರೇಷ್ಠ ಸಂವಿಧಾನದಿಂದಾಗಿ ಭಾರತವು ಅತ್ಯುತ್ತಮ ಪ್ರಜಾಪ್ರಭುತ್ವ ರಾಷ್ಟ್ರವಾಗಿ ಅಭಿವೃದ್ಧಿ ಹೊಂದುತ್ತಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ. ಭಾರತ ಇಡೀ ವಿಶ್ವದಲ್ಲೇ ಯುವ ಪ್ರಜಾಪ್ರತಭುತ್ವದ ದೇಶವಾಗಿದ್ದು ಯುವಸಮೂಹ ಮತದಾನ ಮಾಡುವಾಗ ಬಹಳಷ್ಟು ಚಿಂತನೆ ನಡೆಸಿ ಯಾರಿಂದ ಸಮಾಜಕ್ಕೆ ಒಳ್ಳೆಯದಾಗುತ್ತದೆ ಎಂಬುದನ್ನು ಅರ್ಥೈಸಿಕೊಂಡು ಮತ ಚಲಾಯಿಸಬೇಕು ಎಂದು ತುಮಕೂರು ಜಿಲ್ಲಾಧಿಕಾರಿ ಶುಭಕಲ್ಯಾಣ್ ಹೇಳಿದ್ದಾರೆ. ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅನುಸರಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮ ಜವಾಬ್ದಾರಿ ಎಂದು ಮಂಡ್ಯದಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ರಮೇಶ್ ಬಂಡಿಸಿದ್ದೇಗೌಡ ಸ್ಪಷ್ಟಪಡಿಸಿದ್ದಾರೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ

ದಿನಾಚರಣೆ ಅಂಗವಾಗಿ ಬಳ್ಳಾರಿ ನಗರದಲ್ಲಿ ಇಂದು ಸೈಕಲ್ ಜಾಥಾ ನಡೆಯಿತು. ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುವಲ್ಲಿ ಯುವಜನತೆಯ ಪಾತ್ರ ಪ್ರಮುಖವಾಗಿದೆ ಎಂದು ಕೋಲಾರ ಸಂಸದ ಎಂ.ಮಲ್ಲೇಶ್ ಬಾಬು ಅಭಿಪ್ರಾಯಪಟ್ಟಿದ್ದಾರೆ. ಸಂವಿಧಾನ ರಚನೆಯ ಮೂಲಕ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಯೊಬ್ಬರಿಗೂ ಮತದಾನದ ಹಕ್ಕು ಮತ್ತು ಸಮಾನವಾಗಿ ಬದುಕುವ ಅವಕಾಶ ನೀಡಿದ್ದಾರೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ತಿಳಿಸಿದ್ದಾರೆ. ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಿಮಿತ್ತ ಬೆಳಗಾವಿಯ ಸುವರ್ಣ ಸೌಧದಲ್ಲಿ ಆಯೋಜಿಸಿದ ಕಾರ್ಯಕ್ರಮವನ್ನು ಬೆಳಗಾವಿ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಮ್. ಉದ್ಘಾಟಿಸಿದರು. ಪ್ರಜಾಪ್ರಭುತ್ವ ಕೇವಲ ಒಂದು ಸರ್ಕಾರವಲ್ಲ, ಅದು ಮಾನವೀಯ ಮೌಲ್ಯಗಳನ್ನು ಒಳಗೊಂಡ ಜೀವನ ಕ್ರಮ ಎಂದು ಅವರು ಹೇಳಿದರು.

><><><><><><

ಇಂಜಿನಿಯರ್ ಗಳು ಸಮರ್ಪಕವಾಗಿ ಕೆಲಸ ಮಾಡಿದರೆ ನಾಗರಿಕರಿಂದ ತಾನಾಗಿಯೇ ಮೆಚ್ಚುಗೆ ಸಿಗಲಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅಭಿಪ್ರಾಯಪಟ್ಟಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ - ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನಡೆದ ಸರ್.ಎಂ. ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಉತ್ತಮ ನಗರ ನಿರ್ಮಾಣಕ್ಕೆ ಇಂಜನಿಯರ್‌ಗಳ ಶ್ರಮ ಹೆಚ್ಚಿದ್ದು, ಅವರನ್ನು ಗುರುತಿಸುವ ಕೆಲಸವಾಗಿದೆ ಎಂದು ತಿಳಿಸಿದರು. ಜಿಬಿಎ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಹಲವು ಅಭಿಯಂತರರಿಗೆ ಸರ್.ಎಂ. ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

><><><><><><

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪ್ರಸಕ್ತ ಸನ್ನಿವೇಶದಲ್ಲಿ ವನ, ವನ್ಯ ಸಂಪತ್ತಿನ ಸಂರಕ್ಷಣೆಯ ಜವಾಬ್ದಾರಿ ಹಿಂದೆಂದಿಗಿಂತಲೂ ಹೆಚ್ಚಾಗಿದೆ ಎಂದು ಅರಣ್ಯ ಸಚಿವ ಈಶ್ವರ್ ಬಿ ಖಂಡ್ರೆ ಪ್ರತಿಪಾದಿಸಿದ್ದಾರೆ. ಧಾರವಾಡದಲ್ಲಿಂದು ೨೦೨೫ನೇ ಸಾಲಿನ ಅರಣ್ಯ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಇಂದು ಪ್ರಕೃತಿ, ಪರಿಸರದ ಮೇಲೆ ದೌರ್ಜನ್ಯ ನಡೆಯುತ್ತಿದೆ. ಅರಣ್ಯ ಸಂರಕ್ಷಣೆಯ ಪವಿತ್ರ ಹೊಣೆ ಹೊತ್ತಿರುವ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿ ಪ್ರಾಮಾಣಿಕವಾಗಿ ತಮ್ಮ ಕರ್ತವ್ಯ ನಿರ್ವಹಿಸಬೇಕು ಎಂದು ಕರೆ ನೀಡಿದ್ದಾರೆ.

><><><END<><><><